# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಸಾರ್ವಜನಿಕ/ಸರ್ಕಾರಿ ನೌಕರರಾದ ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕ್ ಸಿ ಕೆ ಪುರ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ ನಟರಾಜ್ ರವರು ಕರ್ತವ್ಯ ಲೋಪ/ದುರ್ವತನೆ ಎಸಗಿರುವ ಬಗ್ಗೆ- ಆದೇಶ.

**ಓದಲಾಗಿದೆ:**
1. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ:ಕಂಪ್ಲೇಂಟ್/ಉಪಲೋಕ್/ಬಿಡಿ-226/2015/ಎಆರ್‌ಎಲ್‌ಓ1, ದಿನಾಂಕ: 21-04-2017.
2. ಮಾನ್ಯ ಉಪಲೋಕಾಯಕ್ತರವರ ವರದಿ ಸಂಖ್ಯೆ:ಕಂಪ್ಲೇಂಟ್/ಉಪಲೋಕ್/ ಬಿಡಿ-226/2015/ಸನಿಕಾಸ-1, ದಿನಾಂಕ: 21-03-2017.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ದಿನಾಂಕ: 21-04-2017 ರವರ ಪತ್ರದೊಂದಿಗೆ ಕನಾಟಕ ಲೋಕಾಯುಕ್ತ ಕಾಯ್ದೆ 1984 ಕಲಂ 12(3) ರನ್ವಯ ಮಾನ್ಯ ಉಪಲೋಕಾಯುಕ್ತರವರ ಸಲ್ಲಿಸಿರುವ ವರದಿಯಲ್ಲಿ ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕ್ ವರದಿಗಾರರಾದ ಶ್ರೀ ಕೆ.ಎಸ್.ನವೀನ್ ಕುಮಾರ್ ಬಿನ್ ಲೇ.ಸಣ್ಣತಿಮ್ಮಯ್ಯ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆ, ಪಾವಗಡ ತಾಲ್ಲೂಕು, ಸಿಕೆ ಪುರ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ ನಟರಾಜ್ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

**ದೂರಿನ ಸಂಕ್ಷಿಪ್ತ ವಿವರಣೆ:**

ತುಮಕೂರು ಜಿಲ್ಲೆ ಪಾವಗಡ ತಾಲ್ಲೂಕ್ ಸಿ ಕೆ ಪುರ ಗ್ರಾಮ ಪಂಚಾಯತ್‌ನಲ್ಲಿ ಎದುರುದಾರರು ಮತ್ತು ಇತರರು ಸೇರಿಕೊಂಡು ಕಾವೇರಿ ಗ್ರಾಮೀಣ ಬ್ಯಾಂಕ್‌ನ ಚೆಕ್ ತಿದ್ದಿ, ಹಣ ಡ್ರಾ ಮಾಡಿ, ಸದರಿ ಹಣವನ್ನು ದುರುಪಯೋಗ ಪಡಿಸಿಕೊಂಡಿರುವುದಾಗಿ ಹೇಳಿದ್ದಾರೆ.

**ದೂರಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ-**

ಸದರಿ ಗ್ರಾಮ ಪಂಚಾಯತ್‌ಗೆ ಸಂಬಂಧಪಟ್ಟಂತೆ ನೀರು ಸರಬರಾಜು ಮಾಡಲು ಬೇಕಾದ ಅಗತ್ಯ ವಸ್ತುಗಳನ್ನು ಅತ್ಲೂರು ಹಾರ್ಡ್‌ವೇರ್ ಷಾಪ್ ಮೂಲಕ ಪಡೆಯಲಾಗುತ್ತಿದ್ದು, ಅದರ ಮಾಲೀಕರು ಶ್ರೀ ನರೇಶ್ ಬಾಬು ಎ.ಎನ್. ಮೇಜರ್ ನಾಗರತ್ನಯ್ಯ ಶೆಟ್ಟಿ ರವರುಗಳಾಗಿದ್ದಾರೆ. ಸದರಿ ವಸ್ತುಗಳ ಖರೀದಿಗೆ ಸಂಬಂಧಪಟ್ಟಂತೆ ಶ್ರೀ ನರೇಶ್ ಬಾಬು ರವರಿಗೆ ದಿ:02-11-2014 ರಂದು ಚೆಕ್ ನಂ.002095ನ್ನು ರೂ.45,000/-ಗಳಿಗೆ ಮತ್ತು ದಿ:24-09-2014ರಂದು ಚೆಕ್ ನಂ.002094ನ್ನು ರೂ.50,000/-ಗಳಿಗೆ ನೀಡಲಾಗಿದೆ. ಸದರಿ ಚೆಕ್‌ಗಳಿಗೆ ತಾವು ಮತ್ತು ಅಧ್ಯಕ್ಷರು ಸಹಿ ಮಾಡಿದ್ದು, ಆದರೆ ಸದರಿ ಶ್ರೀ ನರೇಶ್ ಬಾಬು ರವರು ತಮ್ಮ ಪಂಚಾಯತಿಗೆ ಮೋಸ ಮಾಡಿ ರೂ.2 ಲಕ್ಷ ಹಣವನ್ನು ದುರುಪಯೋಗ ಪಡಿಸಿಕೊಂಡಿದ್ದರ ಬಗ್ಗೆ ತಾವು ಸದರಿಯವರ ವಿರುದ್ಧ ಪೋಲಿಸ್ ಠಾಣೆಗೆ ದೂರು ಸಲ್ಲಿಸಿರುವುದಾಗಿ ಹೇಳಿದ್ದಾರೆ.

ಎದುರುದಾರರ ಆಕ್ಷೇಪಣೆಗೆ ದೂರುದಾರರಿಂದ ಪ್ರತ್ಯುತ್ತರವನ್ನು ಕೇಳಲಾಗಿ, ದೂರುದಾರರು ಯಾವುದೇ ಪ್ರತ್ಯುತ್ತರವನ್ನು ಸಲ್ಲಿಸಿಲ್ಲ.

**ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ-**

ಸಿ ಕೆ ಪುರ ಗ್ರಾಮ ಪಂಚಾಯತ್‌ಗೆ ಸಂಬಂಧಪಟ್ಟಂತೆ ಜನ ಸಾಮಾನ್ಯರಿಗೆ ನೀರು ಸರಬರಾಜು ಮಾಡುವ ಉದ್ದೇಶದಿಂದ ಅವಶ್ಯಕ ಸಾಮಗ್ರಿಗಳನ್ನು ಶ್ರೀ ನರೇಶ್ ಬಾಬು ರವರಿಗೆ ಸಂಬಂಧಿಸಿದ ಅಲ್ಲೂರು ಹಾರ್ಡ್‌ವೇರ್

ಅಂಗಡಿಯ ಮೂಲಕ ಖರೀದಿಸಿದ್ದು, ಈ ಬಗ್ಗೆ ದಿ:21-12-2014 ರಂದು ಕಾವೇರಿ ಗ್ರಾಮೀಣ ಬ್ಯಾಂಕ್ ಶಾಖೆಯ ಚೆಕ್ ನಂ.002095ನ್ನು ರೂ.45,000/- ಮತ್ತು ದಿ:24-09-2014 ರಂದು ಕಾವೇರಿ ಗ್ರಾಮೀಣ ಬ್ಯಾಂಕ್ ಶಾಖೆಯ ಚೆಕ್ ನಂ.002094ನ್ನು ರೂ.50,000/-ಗಳಿಗೆ ನೀಡಿದ್ದು, ಸದರಿ ಚೆಕ್‌ಗಳಿಗೆ ಎದುರುದಾರರು ಮತ್ತು ಅಂದಿನ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಹನುಮಕ್ಕ ರವರು ಸಹಿ ಮಾಡಿದ್ದಾರೆ. ಆದರೆ, ಸದರಿ ಚೆಕ್‌ಗಳ ಮೇಲೆ ರೂ.45,000/-ಕ್ಕೆ ಬದಲು ರೂ.1,45,000/- ಮತ್ತು ರೂ.50,000/-ಕ್ಕೆ ಬದಲು ರೂ.1,50,000/-ಗಳೆಂದು ತಿದ್ದುಪಡಿ ಮಾಡಿ, ಹಣ ಡ್ರಾ ಮಾಡಿ ದುರುಪಯೋಗ ಪಡಿಸಿಕೊಂಡಿರುವುದು ಕಂಡು ಬಂದಿದೆ. ಸದರಿ ಗ್ರಾಮ ಪಂಚಾಯತ್‌ನ ಹಣಕಾಸು ವ್ಯವಹಾರವನ್ನು ನಿರ್ವಹಣೆ ಮಾಡುವುದ ಎದುರುದಾರರ ಆಧ್ಯ ಕರ್ತವ್ಯವಾಗಿದೆ. ಅಲ್ಲದೇ, ಪ್ರತಿ ದಿನ ಪಂಚಾಯತ್‌ಗೆ ಸೇರಿದ ಬ್ಯಾಂಕ್ ಖಾತೆಯಲ್ಲಿ ಎಷ್ಟು ವಹಿವಾಟಾಗಿದೆ? ಎಷ್ಟು ಡ್ರಾ ಮಾಡಲಾಗಿದೆ? ಎಂಬ ಬಗ್ಗೆ ಪರಿಶೀಲಿಸುವುದು ಎದುರುದಾರರ ಆಧ್ಯ ಕರ್ತವ್ಯವಾಗಿದೆ. ಸದರಿ ಗ್ರಾಮ ಪಂಚಾಯತ್ ಖಾತೆಯಿಂದ ಹಣ ಹೆಚ್ಚುವರಿಯಾಗಿ ದಾಖಲೆಗಳನ್ನು ತಿದ್ದಿ ಡ್ರಾ ಮಾಡಿರುವ ವಿಚಾರ ಎದುರುದಾರರಿಗೆ ಗೊತ್ತಿದ್ದರೂ ಸಹ ಸದರಿಯವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ. ಎದುರುದಾರರಿ ಸದರಿ ಹಾರ್ಡ್‌ವೇರ್ ಅಂಗಡಿಯ ಮಾಲೀಕರಾದ ಶ್ರೀ ನರೇಶ್ ಬಾಬು ರವರ ಜೊತೆ ಸೇರಿ ಚೆಕ್‌ಗಳನ್ನು ತಿದ್ದುಪಡಿ ಮಾಡಿ, ಹೆಚ್ಚುವರಿ ಹಣ ಡ್ರಾ ಮಾಡಿ, ದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು, ದಾಖಲಾತಿಗಳನ್ನು ಹಾಗೂ ಎದುರುದಾರ ಆಕಷೇಪಣೆಯನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡುವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣ ಇಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

ಆದ್ದರಿಂದ ಎದುರುದಾರರು ಸಾರ್ವಜನಿಕ/ಸರ್ಕಾರಿ ನೌಕರರಾಗಿದ್ದು, ತಮ್ಮ ಕರ್ತವ್ಯ ಪರಿಪಾಲನೆಯಲ್ಲಿ ನಿಷ್ಠೆಯನ್ನು ತೋರದೇ, ಕರ್ತವ್ಯಲೋಪವೆಸಗಿ, ದುರ್ವರ್ತನೆ ತೋರಿಸಿ ಸಾರ್ವಜನಿಕ/ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಮದ ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮ, 1966 ರ ನಿಯಮಗಳು 3(1) ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿರುತ್ತಾರೆಂದು ಕಂಡುಬಂದಿರುವುದರಿಂದ, ಅವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಶ್ರೀ ನಟರಾಜ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸಿ ಕೆ ಪುರ ಗ್ರಾಮ ಪಂಚಾಯತ್, ಪಾವಗಡ ತಾಲ್ಲೂಕ್, ತುಮಕೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ/395/ಗ್ರಾಪಂಕಾ/2017 ಬೆಂಗಳೂರು, ದಿನಾಂಕ: 16-05-2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ನಟರಾಜ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸಿ ಕೆ ಪುರ ಗ್ರಾಮ ಪಂಚಾಯತ್, ಪಾವಗಡ ತಾಲ್ಲೂಕ್, ತುಮಕೂರು ಜಿಲ್ಲೆ ಇವರ ವಿರುದ್ಧದ ಆಪಾದನೆಗಳ ಬಗ್ಗೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ 14(ಎ) ಅಡಿಯಲ್ಲಿ ಈ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಇವರಿಗೆ ವಹಿಸಲಾಗಿದೆ.

(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿ 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಮತ್ತು ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಪುಟ ಸಂಖ್ಯೆ 1 ರಿಂದ 41 ರವರೆಗಿನ ಮೂಲದಾಖಲೆಗಳನ್ನು ಈ ಪತ್ರದೊಂದಿಗೆ ಹಿಂದಿರುಗಿಸಲಾಗಿದೆ)
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ತುಮಕೂರು ಜಿಲ್ಲೆ.
5) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಪಾವಗಡ ತಾಲ್ಲೂಕು, ತುಮಕೂರು ಜಿಲ್ಲೆ.
6) ಶ್ರೀ ನಟರಾಜ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಸಿ ಕೆ ಪುರ ಗ್ರಾಮ ಪಂಚಾಯತ್, ಪಾವಗಡ ತಾಲ್ಲೂಕ್, ತುಮಕೂರು ಜಿಲ್ಲೆ.
7) ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.